ಕರ್ನಾಟಕ ಸರ್ಕಾರ

ಸಂ: ಸಿಆಸುಇ 46 ಇಆಸು 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 11.03.2013.

ADO /Registam

**ಸುತ್ತೋಲೆ**

ಸಾರ್ವಜನಿಕರು ಅಧಿಕಾರಿಗಳನ್ನು ಭೇಟಿ ಮಾಡಲು ಕಚೇರಿಗಳಿಗೆ ಬಂದ ಸಮಯದಲ್ಲಿ ಅಧಿಕಾರಿಗಳು ಕಚೇರಿಗಳಲ್ಲಿ ಲಭ್ಯವಿಲ್ಲದೆ ಇರುವ ಸಂದರ್ಭಗಳಲ್ಲಿ ಅವರ ಅಧೀನದಲ್ಲಿರುವ ಸಿಬ್ಬಂದಿಯು ಈ ಬಗ್ಗೆ ಸಾರ್ವಜನಿಕರಿಗೆ ಸರಿಯಾಗಿ ಮಾಹಿತಿ ನೀಡದೆ ಇರುವ ಬಗ್ಗೆ ಪತ್ರಿಕೆಗಳಲ್ಲಿ ಟೀಕೆಗಳು ಬಂದಿರುವುದನ್ನು ಗಮನಿಸಲಾಗಿದೆ.

ಈ ಹಿನ್ನೆಲೆಯಲ್ಲಿ, ಇಂತಹ ಮುಜುಗರಕ್ಕೊಳಗಾಗುವ ಸನ್ನಿವೇಶಗಳಿಂದ ಪಾರಾಗಲು ಅಧಿಕಾರಿಗಳು ಕಚೇರಿಯಲ್ಲಿ ಹಾಜರಿರದ ಸಮಯದಲ್ಲಿ ಅಂದರೆ, ರಜೆ ಹಾಕಿದಲ್ಲಿ, ಸಭೆಗಳಿಗೆ ಹಾಜರಾಗಲು ಹೊರಗೆ ಹೋದಲ್ಲಿ ಈ ಬಗ್ಗೆ ಸ್ಪಷ್ಟ ಮಾಹಿತಿಯನ್ನು ತಮ್ಮ ಆಪ್ತ ಸಹಾಯಕರುಗಳಿಗೆ/ಅಧೀನ ಸಿಬ್ಬಂದಿಗೆ ನೀಡುವುದು ಹಾಗೂ ಸಾರ್ವಜನಿಕರು ಕಚೇರಿಗಳಿಗೆ ಅಧಿಕಾರಿಗಳನ್ನು ಭೇಟಿ ಮಾಡಲು ಬಂದ ಸಮಯದಲ್ಲಿ ಸದರಿ ಮಾಹಿತಿಯನ್ನು ಅವರ ಆಪ್ತ ಕಾರ್ಯದರ್ಶಿಗಳು/ಆಪ್ತ ಸಹಾಯಕರು ಸಾರ್ವಜನಿಕರಿಗೆ ಸೌಜನ್ಯವಾಗಿ ತಿಳಿಸಲು ನಿರ್ದೇಶನ ನೀಡುವಂತೆ ಈ ಮೂಲಕ ಸೂಚಿಸಲಾಗಿದೆ.

[ಎಸ್. ವಿ. ರಂಗನಾಥ್]
ಸರ್ಕಾರದ ಮುಖ್ಯ ಕಾರ್ಯದರ್ಶಿ

ಇವರಿಗೆ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಸರ್ಕಾರದ ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರು.
4. ಕಚೇರಿ ಪ್ರತಿ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

2274

ಹಿಂಬರಹ

ಸಂಖ್ಯೆ: ಡಿಟಿಇ 2 ಇಎಸ್‌ಟಿ(9) 2012, ದಿನಾಂಕ: 27-03-2013

ಮೇಲ್ಕಂಡ ಸರ್ಕಾರಿ ಸುತ್ತೋಲೆಯ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1) ಈ ಇಲಾಖೆಗೆ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳು, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಪೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ
2) ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿಗಳಿಗೆ ಮಾಹಿತಿಗಾಗಿ
3) ನಿರ್ದೇಶನಾಲಯದ ಎಲ್ಲಾ ಸಿಬ್ಬಂದಿಯವರಿಗೆ ಮಾಹಿತಿಗಾಗಿ.
4) ನಿರ್ದೇಶನಾಲಯದ ನಗದು ವಿಭಾಗಕ್ಕೆ ಮಾಹಿತಿಗಾಗಿ.
5) ಇ-ಆಡಳಿತ ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

ಆಡಳಿತಾಧಿಕಾರಿ.

P est(9)-G.O.